# ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : 1566

**ಸದಸ್ಯರ ಹೆಸರು** : ಶ್ರೀ ಪ್ರತಾಪ್ ಸಿಂಹನಾಯಕ್ ಕೆ (ವಿಧಾನಸಭೆಯಿಂದ ಚುನಾಯಿತರಾದವರು)

**ಉತ್ತರಿಸುವ ದಿನಾಂಕ** : 21.03.2025

**ಉತ್ತರಿಸುವ ಸಚಿವರು** : ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ನೆರೆ ರಾಜ್ಯವಾದ ಕೇರಳ ಸರ್ಕಾರ ಕನ್ನಡ ವಿರೋಧಿ ಧೋರಣೆಯನ್ನು ಮುಂದುವರೆಸಿದ್ದು, ಗಡಿನಾಡಾಗಿರುವ ಹಿನ್ನೆಲೆಯಲ್ಲಿ ಕಾಸರಗೋಡು ಕನ್ನಡಿಗರಿಗೆ ಈವರೆಗೆ ಸಿಗುತ್ತಿದ್ದ ಸೌಲಭ್ಯಗಳು ಹಾಗೂ ಉದ್ಯೋಗಗಳನ್ನು ಕಸಿದುಕೊಂಡು ಅವರನ್ನು ಸಂಕಷ್ಟಕ್ಕೆ ದೂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬಂದಿದೆ. |
| ಆ) | ಬಂದಿದ್ದಲ್ಲಿ, ಈ ರೀತಿ ಗಡಿನಾಡ ಕನ್ನಡಿಗರ ಮೂಲಭೂತ ಹಕ್ಕಿಗೆ ತೊಂದರೆ ಕೊಡುವ ದುಸ್ಸಾಹಸಕ್ಕೆ ಇಳಿದಿರುವ ಕೇರಳ ಸರ್ಕಾರಕ್ಕೆ ತನ್ನ ವಿರೋಧ, ಪ್ರತಿಭಟನೆ ಸೂಚಿಸುವುದರ ಜೊತೆಗೆ ಗಡಿನಾಡ ಕನ್ನಡಿಗರ ಹಿತರಕ್ಷಣೆಯ ಹೊಣೆಗಾರಿಕೆ ತನ್ನ ಆದ್ಯ ಕರ್ತವ್ಯ ಎಂಬ ಸ್ಪಷ್ಟ ನಿಲುವು ತಿಳಿಸಲು ಸರ್ಕಾರ ಇದುವರೆಗೆ ಏನು ಕ್ರಮ ವಹಿಸಿದೆ; | ಕಾಸರಗೋಡು ಪ್ರದೇಶವು ಕರ್ನಾಟಕದ ಗಡಿ ಭಾಗವಾಗಿದ್ದು, ಇಲ್ಲಿನ ಬಹುತೇಕ ಗ್ರಾಮಗಳ ಹೆಸರುಗಳು ಕನ್ನಡ ಭಾಷೆಯಲ್ಲಿರುತ್ತವೆ. ಆದರೆ ಕೇರಳ ಸರ್ಕಾರವು ಕೆಲವು ಕನ್ನಡ ಭಾಷಿತ ಗ್ರಾಮಗಳ ಹೆಸರುಗಳನ್ನು ಮಲೆಯಾಳಿ ಭಾಷೆಗೆ ಭಾಷಾಂತರಿಸಿಕೊಂಡಿರುತ್ತಾರೆ. ಈ ರೀತಿ ಮಲೆಯಾಳಕ್ಕೆ ಭಾಷಾಂತರಗೊಂಡಿರುವ ಗ್ರಾಮಗಳ ಹೆಸರುಗಳನ್ನು ಹಿಂತೆಗೆದುಕೊಳ್ಳುವಂತೆ ನಿಕಟ ಪೂರ್ವ ಮಾನ್ಯ ಮುಖ್ಯಮಂತ್ರಿಗಳು ದಿನಾಂಕ: 26.06.2021ರ ಪತ್ರದಲ್ಲಿ ಕೇರಳ ಸರ್ಕಾರದ ಮುಖ್ಯಮಂತ್ರಿಯವರನ್ನು ಕೋರಲಾಗಿ, ಇದಕ್ಕೆ ಸಕಾರಾತ್ಮಕವಾಗಿ ಸ್ಪಂದಿಸಿದ್ದರು.<br><br>ಆದರೆ, ಇಂತಹ ಕೃತ್ಯಗಳು ಮತ್ತೆ ಮುಂದುವರೆದ ಕಾರಣ ಕರ್ನಾಟಕ ಗಡಿ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರು, ಕೇರಳ ರಾಜ್ಯದ ಮುಖ್ಯಮಂತ್ರಿಗಳನ್ನು ದಿನಾಂಕ:06-02-2023 ರಂದು ಭೇಟಿ ಮಾಡಿ ಅಹವಾಲನ್ನು ಸಲ್ಲಿಸಿ ಗ್ರಾಮಗಳ ಹೆಸರು, ರಸ್ತೆ, ಪೋಸ್ಟ್ ಆಫೀಸ್, ಪೋಲೀಸ್ ಠಾಣೆ, ಬ್ಯಾಂಕ್, ಅಂಗನವಾಡಿ ಕೇಂದ್ರ ಮತ್ತು ರೇಷನ್ ಕಾರ್ಡ್ ಗಳಲ್ಲಿ ಭಾರತ ಸಂವಿಧಾನದ ದ್ವಿಭಾಷಾ ನೀತಿಯಂತೆ ಕನ್ನಡ ಭಾಷೆಯನ್ನು ಕಡ್ಡಾಯವಾಗಿ ಮುದ್ರಿಸಲು ವಿನಂತಿಸಿರುತ್ತಾರೆ. |
| ಇ) | ಯಾವ ಕಾಲಮಿತಿಯೊಳಗೆ ಗಡಿನಾಡ ಕನ್ನಡಿಗರ ರಕ್ಷಣೆ ಹಾಗೂ ಅವರಿಗೆ ನ್ಯಾಯಯುತವಾಗಿ ಸಿಗಬೇಕಾಗಿರುವ ಸೌಲಭ್ಯ ಹಾಗೂ ಉದ್ಯೋಗಗಳನ್ನು ದೊರಕಿಸಿಕೊಡಲು ಸರ್ಕಾರ ಅಗತ್ಯ ಹಾಗೂ ತ್ವರಿತ ಕ್ರಮ ವಹಿಸುವುದು? | |

| | | |
|---|---|---|
| | | ಮುಂದುವರೆದು, ಈ ಸಮಸ್ಯೆಯನ್ನು ಶಾಶ್ವತವಾಗಿ ಪರಿಹರಿಸಲು ಗಡಿಪ್ರಾಧಿಕಾರದ ಸದಸ್ಯರ ಅಧ್ಯಕ್ಷತೆಯಲ್ಲಿ ಒಂದು ಸಮಿತಿ ರಚಿಸಿ, ವರದಿ ಪಡೆಯಲು ತೀರ್ಮಾನಿಸಲಾಗಿರುತ್ತದೆ.<br><br>ಕೇರಳ ಸರ್ಕಾರವು ಕನ್ನಡ ಮಾಧ್ಯಮ ಶಾಲೆಗಳಿಗೆ ಕನ್ನಡ ಭಾಷೆ ಗೊತ್ತಿಲ್ಲದ ಮಲಯಾಳಿ ಶಿಕ್ಷಕರನ್ನು ನೇಮಕ ಮಾಡಿರುವುದನ್ನು ಕಾಸರಗೋಡಿನ ಕನ್ನಡ ಸಂಘಟನೆಗಳು ಪ್ರತಿಭಟಿಸಿ, ನ್ಯಾಯಾಲಯದಲ್ಲಿ ದಾವೆಗಳನ್ನು ಹೂಡಿರುತ್ತವೆ.<br><br>ಕೇರಳ ರಾಜ್ಯದ ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ದಾಖಲಿಸಿರುವ ರಿಟ್ ಅರ್ಜಿ ಸಂಖ್ಯೆ:21835/2023 ದಿನಾಂಕ: 21.08.2023ರಲ್ಲಿ ಕನ್ನಡ ಬಾರದ ಮಲಯಾಳಿ ಶಿಕ್ಷಕರನ್ನು ಕನ್ನಡ ಮಾಧ್ಯಮದ ಶಾಲೆಯಿಂದ ವಾಪಸ್ಸು ಪಡೆಯಲು ಆದೇಶಿಸಿರುತ್ತದೆ.<br><br>ಇದೇ ರೀತಿ ಅನ್ಯ ಭಾಷೆಯ ಸಿಬ್ಬಂದಿಯನ್ನು ಕೋರಿಕಂಡಂ ಕಾಸರಗೋಡು ಜಿಲ್ಲೆಯ ಅಂಗನವಾಡಿ ಕೇಂದ್ರಕ್ಕೆ ಶಿಕ್ಷಕಿಯಾಗಿ ನೇಮಕ ಮಾಡಿದ್ದನ್ನು ಈ ಅಂಗನವಾಡಿಯ ಮಕ್ಕಳ ಪೋಷಕರು ಕೇರಳ ರಾಜ್ಯದ ಉಚ್ಚ ನ್ಯಾಯಾಲಯದಲ್ಲಿ ದಾಖಲಿಸಿರುವ ರಿಟ್ ಅರ್ಜಿ ಸಂಖ್ಯೆ:41238/2024 ರಲ್ಲಿ ಪ್ರಶ್ನಿಸಿದ್ದು, ಮಾನ್ಯ ಉಚ್ಚನ್ಯಾಯಾಲಯವು ದಿನಾಂಕ:13.02.2025ರಲ್ಲಿ ಶಿಕ್ಷಕಿಯ ನೇಮಕಾತಿಯನ್ನು ರದ್ದುಗೊಳಿಸಿ ಆದೇಶಿಸಿರುತ್ತದೆ.<br><br>ಕೇರಳ ಸರ್ಕಾರದ ಅಡ್ಮಿನಿಸ್ಟ್ರೇಟೀವ್ ಟ್ರಿಬುನಲ್ OA(EKM) 145/2023ರ ಕೇಸಿನ ಬಗ್ಗೆ ದಿನಾಂಕ:05.03.2024ರಲ್ಲಿ ಸಮಗ್ರವಾದ ಆದೇಶ ಹೊರಡಿಸಿ, ಇಂತಹ ಭಾಷಾ ಅಲ್ಪಸಂಖ್ಯಾತ ಪ್ರದೇಶಗಳಲ್ಲಿ ಸಂವಿಧಾನದತ್ತ ಅವಕಾಶಗಳಿಗೆ ಭಾದಕವಾಗದ ರೀತಿ ಎಚ್ಚರವಹಿಸುವಂತೆ ಮತ್ತು ಇವರಿಗೆ ಔದ್ಯೋಗಿಕ, ಶೈಕ್ಷಣಿಕ ಮತ್ತು ಸಾಮಾಜಿಕ ಸವಲತ್ತುಗಳನ್ನು ನಿಯಮಾನುಸಾರ ನೀಡುವಂತೆ ಜಿಲ್ಲಾಧಿಕಾರಿಗಳು ತಿರುವನಂತಪುರ, ಇಡುಕ್ಕಿ, ಪಾಲಕ್ಕಾಡು ಮತ್ತು ಕಾಸರಗೋಡು ಜಿಲ್ಲೆಗಳಿಗೆ ನಿರ್ದೇಶನ ನೀಡಿರುತ್ತದೆ. |

**ಸಂಖ್ಯೆ**.ಕಸಂವಾ 38 ಕೆಬಿಎಲ್ ಆಕ 2025

**(ಶಿವರಾಜ ಎಸ್. ತಂಗಡಗಿ)**
ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ
ಕನ್ನಡ ಮತ್ತು ಸಂಸ್ಕೃತಿ ಸಚಿವರು